# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೧<br>Part – I | ಬೆಂಗಳೂರು, ಗುರುವಾರ, ೧೬, ಜುಲೈ, ೨೦೨೬ (ಆಷಾಢ, ೨೫, ಶಕವರ್ಷ, ೧೯೪೮)<br>BENGALURU, THURSDAY, 16, JULY, 2026 (ASHADHA, 25, SHAKAVARSHA, 1948) | ನಂ. ೫೩೦<br>No.530 |
|---|---|---|


## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2026–27ನೇ ಸಾಲಿನ ರಾಜ್ಯ ಸರ್ಕಾರಿ ನೌಕರರ ಸಾರ್ವತ್ರಿಕ ವರ್ಗಾವಣೆ ಅವಧಿ ವಿಸ್ತರಿಸಿರುವುದನ್ನು ಹಿಂಪಡೆಯುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 4 ಸೇನೌವ 2026, ದಿನಾಂಕ: 13.04.2026.
2) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 4 ಸೇನೌವ 2026, ದಿನಾಂಕ: 01.06.2026.
3) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 4 ಸೇನೌವ 2026, ದಿನಾಂಕ: 30.06.2026.
4 ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 4 ಸೇನೌವ 2026, ದಿನಾಂಕ: 15.07.2026

**ಪ್ರಸ್ತಾವನೆ:**

2026–27ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಾರ್ವತ್ರಿಕ ವರ್ಗಾವಣೆಯನ್ನು ಕೆಲವೊಂದು ಷರತ್ತು ಮತ್ತು ನಿರ್ಬಂಧಗಳಿಗೆ ಒಳಪಟ್ಟು ದಿನಾಂಕ:15.04.2026 ರಿಂದ 31.05.2026ರವರೆಗೆ ಕೈಗೊಳ್ಳಲು ಮೇಲೆ (1)ರಲ್ಲಿ ಓದಲಾದ ದಿನಾಂಕ:13.04.2026ರ ಸರ್ಕಾರಿ ಆದೇಶದಲ್ಲಿ ಅವಕಾಶ ಕಲ್ಪಿಸಲಾಗಿತ್ತು. ಸದರಿ ವರ್ಗಾವಣೆ ಅವಧಿಯನ್ನು ದಿನಾಂಕ:31.07.2026ರ ವರೆವಿಗೆ ಮೇಲೆ ಓದಲಾದ (4) ರ ಸರ್ಕಾರಿ ಆದೇಶದಲ್ಲಿ ವಿಸ್ತರಿಸಲಾಗಿರುವುದನ್ನು ಕಾರಣಾಂತರಗಳಿಂದ ಹಿಂಪಡೆಯಲು ಸರ್ಕಾರವು ತೀರ್ಮಾನಿಸಿ, ಕೆಳಕಂಡಂತೆ ಆದೇಶಿಸಿರುತ್ತದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 4 ಸೇನೌವ 2026,**
**ಬೆಂಗಳೂರು, ದಿನಾಂಕ:16.07.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಿನಾಂಕ:13.04.2026ರ ಸರ್ಕಾರದ ಆದೇಶದಲ್ಲಿ ನಿಗದಿಪಡಿಸಿರುವ ಷರತ್ತು ಹಾಗೂ ನಿರ್ಬಂಧಗಳಿಗೆ ಒಳಪಟ್ಟು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ 2026–27ನೇ ಸಾಲಿನ ಸಾರ್ವತ್ರಿಕ ವರ್ಗಾವಣೆ ಅವಧಿಯನ್ನು **ದಿನಾಂಕ: 31.07.2026ರವರೆಗೆ** ವಿಸ್ತರಿಸಿ, ಆದೇಶಿಸಿರುವ ದಿನಾಂಕ:15.07.2026ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 4 ಸೇನೌವ 2026ನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಹಾಗೂ ಅವರ ಹೆಸರಿನಲ್ಲಿ,

(ಎಸ್. ಆರ್. ಶಿವಶಂಕರ್)
ಸರ್ಕಾರ ಉಪ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು–3)


ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297





MADESHWARA NARASIMHA MURTHY JAYASIMHA